**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಂಡೂರು**
**ಸಿ.ಸಿ. ನಂ: 693/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | **ಮೇಟಿ ಪ್ರತಾಪ** | **ಪಿ.ಡಬ್ಲ್ಯೂ-03** |
| **ತಂದೆಯ ಹೆಸರು** | : | **ಶಣಮುಖಪ್ಪ** | **ಸಿ.ಡಬ್ಲ್ಯೂ-03** |
| **ವಯಸ್ಸು** | : | **42 ವರ್ಷ** | |
| **ಉದ್ಯೋಗ** | : | **ವ್ಯವಸಾಯ** | **ಸಾಕ್ಷಿಗೆ ಪ್ರಮಾಣ ವಚನ ಭೋದಿಸಿದ ದಿನಾಂಕಃ 24.08.2026.** |
| **ವಾಸಸ್ಥಳ** | : | **ಭುಂಜಗನಗರ ಗ್ರಾಮ** | |

**ಸಾಕ್ಷಿಯ ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ03.05.2023 ರಂದು ಪೊಲೀಸ್‌ರು ಭುಂಜಗನಗರ ಗ್ರಾಮಕ್ಕೆ ಬಂದಾಗ ನನ್ನ ಸಹಿ ಪಡೆದಿರುತ್ತಾರೆ. ಯಾವ ವಿಚಾರಕ್ಕೆ ಸಹಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಆ ಸಮಯದಲ್ಲಿ ಚಾಸಾ2 ರವರು ಇದ್ದರು. ಸಾಕ್ಷಿ ನಿಪಿ-2 ಮತ್ತು 3 ರಲ್ಲಿ ಇರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-2(ಸಿ) ಮತ್ತು ನಿಪಿ-3(ಡಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-4 ರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಎಪಿಪಿಯವರು ಸಾಕ್ಷಿಯನ್ನು ಭಾಗಶ: ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃ ಎ.ಪಿ.ಪಿ. ರವರಿಂದಃ**

ದಿಃ03.05.2023 ರಂದು ಪೊಲೀಸ್‌ರು ಚಾಸಾ1 ರವರ ಮನೆಯ ಮುಂದೆ ಚಾಸಾ1 ಮತ್ತು ಅವರ ಗಂಡನ ನಡುವೆ ಆದ ಜಗಳದ ವಿಚಾರವಾಗಿ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಪಂಚನಾಮೆಯ ಸಮಯದಲ್ಲಿ ಹಾಜರಿದ್ದರು ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಸಂಜೆ 4.00 ರಿಂದ 5.00 ರವರೆಗೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ  ಆರೋಪಿ ಪರಃ ಶ್ರೀ ಪಿ.ಬಿ.ಎಸ್ ವಕೀಲರಿಂದ. ಇಲ್ಲ</u>**

**<u>ಮರು ವಿಚಾರಣೆಃ ಇಲ್ಲ.</u>**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ.ಹೇ.ಕೆ.ಸರಿ.ಇದೆ.**

**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ಸಂಡೂರು.**